ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಮಕ್ಕಳ ಮುಂದಿನ ವ್ಯಾಸಂಗದ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

857 (847) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನೇಕ ವಲಸೆ ಕಾರ್ಮಿಕ ಪೋಷಕರು ತಮ್ಮ ಊರುಗಳಿಗೆ ಮರಳಿದ್ದು ಅವರ ಮಕ್ಕಳು ಮುಂದಿನ ತರಗತಿಗೆ ಪ್ರವೇಶ ಪಡೆಯುವುದು ಕಷ್ಟಕರವಾಗಿದ್ದು ಈ ಬಗ್ಗೆ ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು ;

(ಆ) ಸರ್ಕಾರವು `ವಿದ್ಯಾಗಮ' ಯೋಜನೆಯಡಿ ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿ ತರಗತಿ ನಡೆಸುವಂತೆ ಶಿಕ್ಷಕರ ಮೇಲೆ ಒತ್ತಡ ಹೇರುವ ಮೂಲಕ ಅವರ ಜೀವನವನ್ನು ಅಪಾಯಕ್ಕೆ ಒಡ್ಡುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಮಧ್ಯಾಹ್ನದ ಬಿಸಿಯೂಟ ಕಾರ್ಯಕ್ರಮ ಮಕ್ಕಳನ್ನ ಶಾಲೆಯತ್ತ ಕರೆತರಲು ಪ್ರಮುಖ ಕೊಂಡಿಯಾಗಿ ಅದು ಪೋಷಕರ ಮೇಲಿನ ಹೊರೆಯನ್ನು ಕಡಿಮೆ ಮಾಡುತ್ತಿತ್ತಾದರೂ ಈಗ ಶಾಲೆಗಳು ಮುಚ್ಚಿರುವ ಕಾರಣದಿಂದಾಗಿ ಅನೇಕ ಮಕ್ಕಳು ಇಂದು ಗ್ರಾಮೀಣ ಭಾಗದಲ್ಲಿ ಬಾಲ ಕಾರ್ಮಿಕರಾಗಿ ದುಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ರಾಜ್ಯದ 80 ಲಕ್ಷ ವಿದ್ಯಾರ್ಥಿಗಳ ಪೈಕಿ ಶೇ. 62% ಮಕ್ಕಳಿಗೆ ಮಾತ್ರ ಸ್ಮಾರ್ಟ್ ಫೋನ್, ಲ್ಯಾಪ್ ಟ್ಯಾಪ್‌ನ ಲಭ್ಯತೆ ಇದ್ದು ಶೇ. 53.75 % ಮಕ್ಕಳಿಗೆ ಮಾತ್ರ ಇಂಟರ್ನೆಟ್ ಸಂಪರ್ಕ ಲಭ್ಯವಿದ್ದು ಈ ಎಲ್ಲಾ ತಂತ್ರಜ್ಞಾನದ ಲಭ್ಯತೆ ಇಲ್ಲದ ಮಕ್ಕಳು ಆನ್‌ಲೈನ್ ಶಿಕ್ಷಣ ಪಡೆಯಲು ಕೈಗೊಂಡ ಕ್ರಮಗಳೇನು ;

(ಉ) ಗ್ರಾಮೀಣ ಭಾಗದ ಸಾಮಾಜಿಕವಾಗಿ/ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ಆನ್‌ಲೈನ್ ಶಿಕ್ಷಣ ಒದಗಿಸಲು ಯಾವುದೇ ಯೋಜನೆಯನ್ನು ಸರ್ಕಾರ ಈವರೆವಿಗೂ ರೂಪಿಸದಿರಲು ಕಾರಣಗಳೇನು ;

(ಊ) ಅವೈಜ್ಞಾನಿಕ ಲಾಕ್ ಡೌನ್‌ನಿಂದಾಗಿ ಶಾಲೆಗಳ ಮೇಲೆ ಪರೋಕ್ಷವಾಗಿ ಅವಲಂಬಿತ ಕೆಲಸಗಾರರಾದ ಆಯಾಗಳು, ಪಿಯೋನ್‌ಗಳು, ಡ್ರೈವರ್‌ಗಳು, ಹೆಲ್ಪರ್‌ಗಳು, ಕ್ಲೀನರ್‌ಗಳಿಗೆ ಯಾವುದೇ ಉದ್ಯೋಗವಿಲ್ಲದೆ ಅತಂತ್ರ ಬದುಕು ನಡೆಸುತ್ತಿದ್ದು ಇವರೆಲ್ಲರಿಗೂ ಸಹಾಯ ಮಾಡಲು ಸರ್ಕಾರದ ಬಳಿ ಯಾವ ಯೋಜನೆ ಇದೆ ? (ವಿವರ ನೀಡುವುದು)